**ಅಸಲು ದಾವಾ ಸಂಖ್ಯೆ: 697/2021**
**ಪಿಡಬ್ಲೂ -1**

**ದಿಃ 02-04-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**
**ಮುಂದುವರೆದ ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ. ಟಿ.ಎಲ್.ಪಿ. ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.

ನಾನು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

ದಿಃ12.07.2005 ರಂದು 1ನೇ ಪ್ರತಿವಾದಿ 2ನೇ ಪ್ರತಿವಾದಿಯ ಹೆಸರಿಗೆ ಮಾಡಿರುವ ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು, ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂಧಿಸಿದ 2020-21 ನೇ ಸಾಲಿನ ಪಹಣಿ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು, ಗುರುತಿಸಲಾಯಿತು. (2 ಪುಟಗಳು)

ದಿಃ29.02.2012 ರಂದು 2ನೇ ಪ್ರತಿವಾದಿಯು 3ನೇ ಪ್ರತಿವಾದಿಯ ಹೆಸರಿಗೆ ಬರೆದುಕೊಟ್ಟ ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು, ಗುರುತಿಸಲಾಯಿತು.

ದಿಃ18.02.2021 ರಂದು ಸಾರ್ವಜನಿಕ ಮಾಹಿತಿ ಹಕ್ಕು ಅಧಿಕಾರಿ ಹಾಗೂ ಹಿರಿಯ ಉಪನೊಂದನಾಧಿಕಾರಿ, ಬೆಳಗಾವಿ ಇವರು ಮಾಹಿತಿ ಹಕ್ಕು ಅಧಿನಿಯಮದಡಿ ನೀಡಿರುವ ಹಿಂಬರಹವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು, ಗುರುತಿಸಲಾಯಿತು.

ದಿಃ22.02.2021 ರಂದು ವಾದಿ ಸೊಸೈಟಿಯವರು ಹೊರಡಿಸಿದ ಠರಾವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು, ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂಧಿಸಿದ ಛಾಯಾಚಿತ್ರಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-6 ರಿಂದ ನಿಪಿ-10 ಎಂದು ಹಾಗೂ ಅವುಗಳಿಗೆ ಸಂಬಂಧಿಸಿದ ಒಂದು ಸಿಡಿ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-11 ಎಂದು, ಗುರುತಿಸಲಾಯಿತು.

**ವಕೀಲರು ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶವನ್ನು ಕೋರಿದ್ದು ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**Sd/-**
**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,**
**ಬೆಳಗಾವಿ.**